**All India Radio: Bangalore**
**National Bulletin In Kannada**
**05.03.2025  19.35 p.m.**

ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

1. ಜನರು, ಆರ್ಥಿಕತೆ, ನಾವೀನ್ಯತೆಗೆ ಕೇಂದ್ರ ಸರ್ಕಾರ ಆದ್ಯತೆ - ಪ್ರಧಾನಿ ನರೇಂದ್ರ ಮೋದಿ
2. ಸೋನ್ ಪ್ರಯಾಗದಿಂದ ಕೇದಾರನಾಥಕ್ಕೆ ರೋಪ್‌ವೇ ಅಭಿವೃದ್ಧಿಗೆ ಕೇಂದ್ರ ಸರ್ಕಾರ ಅನುಮೋದನೆ
3. ನವದೆಹಲಿಯ ರಾಷ್ಟ್ರಪತಿ ಭವನದಲ್ಲಿಂದು 'ವಿವಿಧತಾ ಕಾ ಅಮೃತ್ ಮಹೋತ್ಸವ್' ಉದ್ಘಾಟಿಸಿದ ರಾಷ್ಟ್ರಪತಿ ದ್ರೌಪದಿ ಮುರ್ಮು
4. ಐಸಿಸಿ ಚಾಂಪಿಯನ್ ಟ್ರೋಫಿ ಕ್ರಿಕೆಟ್; ದಕ್ಷಿಣ ಆಫ್ರಿಕಾ ತಂಡಕ್ಕೆ ೩೬೩ ರನ್‌ಗಳ ಬೃಹತ್ ಗುರಿ ನೀಡಿದ ನ್ಯೂಜಿಲೆಂಡ್

<><><><>

ಕೇಂದ್ರ ಸರ್ಕಾರವು ಮೂಲಸೌಕರ್ಯ ಮತ್ತು ಹೂಡಿಕೆಯಲ್ಲಿ ಕೈಗಾರಿಕೆಗಳಿಗೆ ನೀಡಿದ್ದಷ್ಟೇ ಆದ್ಯತೆಯನ್ನು ಜನರು, ಆರ್ಥಿಕತೆ ಮತ್ತು ನಾವೀನ್ಯತೆಗೆ ನೀಡಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ವಿಡಿಯೋ ಕಾನ್ಫರೆನ್ಸಿಂಗ್ ಮೂಲಕ ಉದ್ಯೋಗ ಕುರಿತಾದ ಬಜೆಟ್ ನಂತರದ ವೆಬಿನಾರ್ ಉದ್ದೇಶಿಸಿ ಮಾತನಾಡಿದ ಅವರು, ಜನರಲ್ಲಿ ಹೂಡಿಕೆಯ ದೃಷ್ಟಿಕೋನವು ಶಿಕ್ಷಣ, ಕೌಶಲ್ಯ ಮತ್ತು ಆರೋಗ್ಯ ರಕ್ಷಣೆ ಎಂಬ ಮೂರು ಸ್ತಂಭಗಳ ಮೇಲೆ ನಿಂತಿದೆ ಎಂದರು. ಇಂದು ಭಾರತದ ಶಿಕ್ಷಣ ವ್ಯವಸ್ಥೆಯು ಹಲವಾರು ದಶಕಗಳ ನಂತರ ಹೇಗೆ ದೊಡ್ಡ ಪರಿವರ್ತನೆಯ ಮೂಲಕ ಸಾಗುತ್ತಿದೆ ಎಂಬುದನ್ನು ಜನರು ನೋಡಬಹುದು ಎಂದು ಅವರು ಹೇಳಿದರು. ಟೆಲಿ ಮೆಡಿಸಿನ್ ಸೌಲಭ್ಯವನ್ನು ಎಲ್ಲ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ವಿಸ್ತರಿಸಲಾಗಿದೆ. ಡೇ-ಕೇರ್ ಕ್ಯಾನ್ಸರ್ ಕೇಂದ್ರಗಳು ಮತ್ತು ಡಿಜಿಟಲ್ ಆರೋಗ್ಯ ಮೂಲಸೌಕರ್ಯಗಳ ಮೂಲಕ ಸರ್ಕಾರವು ಗುಣಮಟ್ಟದ ಆರೋಗ್ಯ ಸೇವೆಯನ್ನು ಎಲ್ಲರಿಗೂ ವಿಸ್ತರಿಸಲು ಬಯಸುತ್ತದೆ ಎಂದು ಪ್ರಧಾನಿ ಮೋದಿ ತಿಳಿಸಿದರು.

ದೇಶೀಯ ಮತ್ತು ಅಂತಾರಾಷ್ಟ್ರೀಯ ಪ್ರವಾಸೋದ್ಯಮವನ್ನು ಉತ್ತೇಜಿಸಲು ಕೇಂದ್ರ ಬಜೆಟ್‌ನಲ್ಲಿ ಅನೇಕ ನಿರ್ಧಾರಗಳನ್ನು ತೆಗೆದುಕೊಳ್ಳಲಾಗಿದೆ. ಪ್ರವಾಸೋದ್ಯಮವನ್ನು ಕೇಂದ್ರೀಕರಿಸಿ ದೇಶಾದ್ಯಂತ ೫೦ ತಾಣಗಳನ್ನು ಅಭಿವೃದ್ಧಿಪಡಿಸಲಾಗುವುದು. ಇದರಿಂದ ಮೂಲಸೌಕರ್ಯದ ಜೊತೆಗೆ ಸ್ಥಳೀಯವಾಗಿ ಉದ್ಯೋಗವು ಹೆಚ್ಚಾಗುತ್ತದೆ ಎಂದು ಪ್ರಧಾನಿ ಮೋದಿ ಮಾಹಿತಿ ನೀಡಿದರು. ಕೃತಕಬುದ್ಧಿಮತ್ತೆ - ಎಐ ಸಾಮರ್ಥ್ಯಗಳನ್ನು ಅಭಿವೃದ್ಧಿಪಡಿಸಲು ಭಾರತವು ರಾಷ್ಟ್ರೀಯ ಭಾಷಾ ಮಾದರಿಯನ್ನು ಸ್ಥಾಪಿಸಲಿದೆ. ಎಐ ಮೂಲಕ ಆರ್ಥಿಕ ಪರಿಹಾರಗಳನ್ನು ಒದಗಿಸಬಲ್ಲ ವಿಶ್ವಾಸರ್ಹ, ಸುರಕ್ಷಿತ ಮತ್ತು ಪ್ರಜಾಪ್ರಭುತ್ವ ದೇಶಕ್ಕಾಗಿ ಜಗತ್ತು ಕಾಯುತ್ತಿದೆ ಎಂದು ಅವರು ಹೇಳಿದರು. ನವೋದ್ಯಮಗಳನ್ನು ಉತ್ತೇಜಿಸಲು ಕೇಂದ್ರ ಸರ್ಕಾರ ಈ ಬಜೆಟ್‌ನಲ್ಲಿ ಹಲವಾರು ಕ್ರಮಗಳನ್ನು ತೆಗೆದುಕೊಂಡಿದೆ. ಸಂಶೋಧನೆ ಮತ್ತು ನಾವೀನ್ಯತೆಯನ್ನು ಉತ್ತೇಜಿಸಲು ೧ ಲಕ್ಷ ಕೋಟಿ ರೂಪಾಯಿಗಳ ಕಾರ್ಪಸ್ ನಿಧಿಗೆ ಅನುಮೋದನೆ ನೀಡಲಾಗಿದೆ. ಇದು ನವೋದ್ಯಮ ವಲಯಗಳಲ್ಲಿ ಹೂಡಿಕೆಯನ್ನು ಹೆಚ್ಚಿಸಲಿದೆ ಎಂದರು. ಉದ್ಯೋಗ ಸೃಷ್ಟಿಯು ಕೇಂದ್ರ ಸರ್ಕಾರದ ಪ್ರಮುಖ ಆದ್ಯತೆಯಾಗಿದೆ. ಉದ್ಯೋಗಾವಕಾಶ ಹೆಚ್ಚಳಕ್ಕೆ ಅನೇಕ ಕ್ರಮಗಳನ್ನು ಸರ್ಕಾರ ಕೈಗೊಂಡಿದೆ. ೨೦೪೭ರ ವೇಳೆಗೆ ವಿಕಸಿತ ಭಾರತ ಗುರಿಯನ್ನು ಸಾಧಿಸುವ ನಿಟ್ಟಿನಲ್ಲಿ ಅನೇಕ ಕ್ರಮಗಳನ್ನು ಸರ್ಕಾರ ಕೈಗೊಳ್ಳುತ್ತಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದರು.

<><><><>

ಸೋನ್ ಪ್ರಯಾಗದಿಂದ ಕೇದಾರನಾಥಕ್ಕೆ ೧೨.೯ ಕಿಲೋಮೀಟರ್ ಉದ್ದದ ರೋಪ್‌ವೇ ಅಭಿವೃದ್ಧಿಗೆ ಕೇಂದ್ರ ಸರ್ಕಾರ ಅನುಮೋದನೆ ನೀಡಿದೆ ಎಂದು ಕೇಂದ್ರ ವಾರ್ತಾ ಮತ್ತು ಪ್ರಸಾರ ಖಾತೆ ಸಚಿವ ಅಶ್ವಿನಿ ವೈಷ್ಣವ್ ನವದೆಹಲಿಯಲ್ಲಿಂದು ತಿಳಿಸಿದ್ದಾರೆ. ನಾಲ್ಕು ಸಾವಿರ ಕೋಟಿ ರೂಪಾಯಿಗಳ ಈ ಯೋಜನೆಯೂ ಯಾತ್ರಿಕರ ಪ್ರಯಾಣದ ಸಮಯವನ್ನು ೯ ಗಂಟೆಯಿಂದ ೩೬ ನಿಮಿಷಗಳಿಗೆ ಇಳಿಸುತ್ತದೆ. ಈ ಯೋಜನೆಯಿಂದ ಪ್ರಮುಖವಾಗಿ ದಿವ್ಯಾಂಗರು ಮತ್ತು ವೃದ್ಧರಿಗೆ ಸಹಾಯವಾಗಲಿದೆ ಎಂದು ಅವರು ಹೇಳಿದರು. ಇದೇ ಮಾದರಿಯಲ್ಲಿ ಹೇಮ್‌ಕುಂಡ್ ಸಾಹೀಬ್‌ನಲ್ಲಿ ೧೨.೪ ಕಿಲೋಮೀಟರ್ ರೋಪ್‌ವೇಯನ್ನು ಸಹ

ಅಭಿವೃದ್ಧಿಪಡಿಸಲಾಗುವುದು. ಈ ಯೋಜನೆಗೆ ಒಟ್ಟು ೨ ಸಾವಿರದ ೬೩೦ ಕೋಟಿ ರೂಪಾಯಿ ವೆಚ್ಚವಾಗಲಿದೆ ಎಂದು ಮಾಹಿತಿ ನೀಡಿದರು. ಜಾನುವಾರುಗಳ ಆರೋಗ್ಯ ರಕ್ಷಣೆ ಮತ್ತು ರೋಗ ತಡೆಗಟ್ಟುವಿಕೆಗಾಗಿ ಕೇಂದ್ರ ಸರ್ಕಾರ ೩ ಸಾವಿರದ ೮೮೦ ಕೋಟಿ ರೂಪಾಯಿಗಳ ಯೋಜನೆಯನ್ನು ಜಾರಿಗೊಳಿಸಿದೆ ಎಂದು ಸಚಿವ ಅಶ್ವಿನಿ ವೈಷ್ಣವ್ ತಿಳಿಸಿದರು.

<><><><>

ನವದೆಹಲಿಯಲ್ಲಿ ಇಂದು ನಡೆದ ರಾಷ್ಟ್ರೀಯ ಸಮಾವೇಶದಲ್ಲಿ ಪಂಚಾಯತ್‌ರಾಜ್ ಸಚಿವಾಲಯದ ಮಾದರಿ ಮಹಿಳಾ ಸ್ನೇಹಿ ಗ್ರಾಮ ಪಂಚಾಯತ್ ಉಪಕ್ರಮಕ್ಕೆ ಕೇಂದ್ರ ಪಂಚಾಯತ್‌ರಾಜ್ ಖಾತೆ ರಾಜ್ಯ ಸಚಿವ ಪ್ರೊಫೆಸರ್ ಎಸ್.ಪಿ.ಸಿಂಗ್ ಬಘೇಲ್ ಹಾಗೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಖಾತೆ ರಾಜ್ಯ ಸಚಿವೆ ಅನುಪ್ರಿಯಾ ಪಟೇಲ್ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಮಾತನಾಡಿದ ಸಚಿವ ಎಸ್.ಪಿ.ಸಿಂಗ್ ಬಘೇಲ್, ಸರ್ಕಾರದ ಯೋಜನೆಗಳನ್ನು ಕಾರ್ಯರೂಪಕ್ಕೆ ತರುವಲ್ಲಿ ಗ್ರಾಮಪಂಚಾಯಿತಿ ಪ್ರತಿನಿಧಿಗಳು ಪ್ರಮುಖ ಆಧಾರಸ್ತಂಭಗಳಾಗಿದ್ದಾರೆ ಎಂದು ಹೇಳಿದರು. ಈ ಉಪಕ್ರಮವು ಸಚಿವಾಲಯದ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ೨೦೨೫ ರ ಭಾಗವಾಗಿದೆ. ಪ್ರತಿ ಜಿಲ್ಲೆಯಲ್ಲಿ ಕನಿಷ್ಠ ಒಂದು ಮಾದರಿ ಮಹಿಳಾ ಸ್ನೇಹಿ ಗ್ರಾಮ ಪಂಚಾಯತ್ ಸ್ಥಾಪಿಸುವುದು ಈ ಉಪಕ್ರಮದ ಪ್ರಾಥಮಿಕ ಉದ್ದೇಶವಾಗಿದೆ. ಇದು ಮಹಿಳಾ ಸ್ನೇಹಿ ಆಡಳಿತ ಪದ್ಧತಿಗಳಿಗೆ ದಾರಿದೀಪವಾಗಿ ಕಾರ್ಯನಿರ್ವಹಿಸಲಿದೆ.

<><><><>

ನವದೆಹಲಿಯ ರಾಷ್ಟ್ರಪತಿ ಭವನದಲ್ಲಿಂದು ವಾರ್ಷಿಕ ಸಾಂಸ್ಕೃತಿಕ ಉತ್ಸವ 'ವಿವಿಧತಾ ಕಾ ಅಮೃತ್ ಮಹೋತ್ಸವ' ವನ್ನು ರಾಷ್ಟ್ರಪತಿ ದ್ರೌಪದಿ ಮುರ್ಮು ಉದ್ಘಾಟಿಸಿದರು. ವಿವಿಧ ಪ್ರದೇಶಗಳ ಸಂಪ್ರದಾಯವನ್ನು ಪ್ರದರ್ಶಿಸುವ ಮೂಲಕ ರಾಷ್ಟ್ರದ ವೈವಿಧ್ಯಮಯ ಪರಂಪರೆಯನ್ನು ಈ ಉತ್ಸವದಲ್ಲಿ ಆಚರಿಸಲಾಗುತ್ತದೆ. ಈ ಉತ್ಸವವು ರಾಷ್ಟ್ರಪತಿ ಭವನವನ್ನು ಸಾಂಸ್ಕೃತಿಕ ವಿನಿಮಯ ಕೇಂದ್ರವನ್ನಾಗಿ ಮಾಡುವ ಗುರಿಯನ್ನು ಹೊಂದಿದೆ. ಭಾರತದ ರೋಮಾಂಚಕ ಪರಂಪರೆಯನ್ನು ನಾಗರಿಕರಿಗೆ ಪರಿಚಯಿಸುತ್ತದೆ ಎಂದು ಸಂಸ್ಕೃತಿ ಸಚಿವಾಲಯ ತಿಳಿಸಿದೆ. ಈ ಆವೃತ್ತಿಯಲ್ಲಿ ೫೦೦ಕ್ಕೂ ಹೆಚ್ಚು ಕುಶಲಕರ್ಮಿಗಳು ಮತ್ತು ನೇಕಾರರು, ಕಾಂಚಿವರಂ, ಕೊಚಂಪಲ್ಲಿ, ಮೈಸೂರು ರೇಷ್ಮೆ ಸೀರೆಗಳು, ಹಿತ್ತಾಳೆ ಮತ್ತು ಮರದ ಕರಕುಶಲ ವಸ್ತುಗಳು ಸೇರಿದಂತೆ ಸಾಂಪ್ರದಾಯಿಕ ಕರಕುಶಲ ಮತ್ತು ಕೈಮಗ್ಗ ಉತ್ಪನ್ನಗಳನ್ನು ಪ್ರದರ್ಶಿಸಲಿದ್ದಾರೆ. ಉತ್ಸವವು ನಾಳೆಯಿಂದ ಇದೇ ೯ರವರೆಗೆ ಪ್ರತಿದಿನ ಬೆಳಗ್ಗೆ ೧೦ ರಿಂದ ರಾತ್ರಿ ೮ ಗಂಟೆವರೆಗೆ ಸಾರ್ವಜನಿಕರಿಗೆ ತೆರೆದಿರುತ್ತದೆ ಎಂದು ಸಚಿವಾಲಯ ಮಾಹಿತಿ ನೀಡಿದೆ.

<><><><>

ರಕ್ಷಣಾ ಸಂಶೋಧನೆ ಮತ್ತು ಅಭಿವೃದ್ಧಿ ಸಂಸ್ಥೆ-ಡಿಆರ್‌ಡಿಒ ಅಡಿಯಲ್ಲಿ ಬೆಂಗಳೂರು ಮೂಲದ ಪ್ರಯೋಗಾಲಯವಾದ ಡಿಫೆನ್ಸ್ ಬಯೋ ಎಂಜಿನಿಯರಿಂಗ್ ಮತ್ತು ಎಲೆಕ್ಟ್ರೋ ಮೆಡಿಕಲ್ ಲ್ಯಾಬರೇಟರಿ-ಡಿಇಬಿಇಎಲ್, ತೇಜಸ್ ಲಘು ಯುದ್ಧ ವಿಮಾನಕ್ಕಾಗಿ ಸ್ಥಳೀಯ ಆನ್‌ಬೋರ್ಡ್ ಆಮ್ಲಜನಕ ಉತ್ಪಾದಿಸುವ ವ್ಯವಸ್ಥೆ ಒಬಿಒಜಿಎಸ್-ಆಧಾರಿತ ಇಂಟಿಗ್ರೇಟೆಡ್ ಲೈಫ್ ಸಪೋರ್ಟ್ ಸಿಸ್ಟಮ್- ಐಎಲ್‌ಎಸ್‌ಎಸ್‌ನ ಉನ್ನತ ಪ್ರಯೋಗಗಳನ್ನು ಯಶಸ್ವಿಯಾಗಿ ನಡೆಸಿದೆ. ಒಬಿಒಜಿಎಸ್ ಆಧರಿತ-ಐಎಲ್‌ಎಸ್‌ಎಸ್, ಹಾರಾಟದ ಸಮಯದಲ್ಲಿ ಪೈಲೆಟ್‌ಗಳಿಗೆ ಉಸಿರಾಡುವ ಆಮ್ಲಜನಕವನ್ನು ಉತ್ಪಾದಿಸಲು ಮತ್ತು ನಿಯಂತ್ರಿಸಲು ವಿನ್ಯಾಸಗೊಳಿಸಲಾಗಿದೆ.

ಇದು ಸಾಂಪ್ರದಾಯಿಕ ದ್ರವ ಆಮ್ಲಜನಕ ಸಿಲಿಂಡರ್ ಆಧಾರಿತ ವ್ಯವಸ್ಥೆಗಳ ಮೇಲಿನ ಅವಲಂಬನೆಯನ್ನು ನಿವಾರಿಸುತ್ತದೆ. ಐಎಲ್‌ಎಸ್‌ಎಸ್, ಹಿಂದೂಸ್ಥಾನ್ ಏರೋನಾಟಿಕ್ಸ್ ಲಿಮಿಟೆಡ್ ಮತ್ತು ಏರೋ ನಾಟಿಕಲ್ ಡೆವಲಪ್ಮೆಂಟ್ ಏಜೆನ್ಸಿಯ ಎಲ್‌ಸಿಎ ಪ್ರೋಟೊಟೈಲ್ ವೆಹಿಕಲ್-೩ ವಿಮಾನವನ್ನು ಕಠಿಣ ಪರೀಕ್ಷೆಗೆ ಒಳಪಡಿಸಲಾಯಿತು. ಇದು ಸರಾಸರಿ ಸಮುದ್ರ ಮಟ್ಟಕ್ಕಿಂತ ೫೦ ಸಾವಿರ ಅಡಿಗಳಷ್ಟು ಎತ್ತರ ಮತ್ತು ಹೆಚ್ಚಿನ ಕುಶಲತೆ ಸೇರಿದಂತೆ ವಿವಿಧ ಹಾರಾಟದ ಪರಿಸ್ಥಿತಿಗಳಲ್ಲಿ ಕಠಿಣ ವಾಯು ವೈದ್ಯಕೀಯ ಮಾನದಂಡಗಳನ್ನು ಪೂರೈಸಿತು. ಯಶಸ್ವಿ ಪರೀಕ್ಷೆಗಾಗಿ ಡಿಆರ್‌ಡಿಒ, ಭಾರತೀಯ ವಾಯುಪಡೆ ಮತ್ತು ಸಂಬಂಧಿತ ಸಂಸ್ಥೆಗಳನ್ನು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಶ್ಲಾಘಿಸಿದ್ದಾರೆ.

<><><><>

ಕ್ವಾಂಟಂ ಕಂಪ್ಯೂಟಿಂಗ್‌ನ ತ್ವರಿತ ವಿಕಸನ ಮತ್ತು ರಾಷ್ಟ್ರೀಯ ಭದ್ರತೆ ಮೇಲೆ ಅದರ ಪರಿಣಾಮಗಳನ್ನು ಕುರಿತು ನೀತಿ ಆಯೋಗವು ನವದೆಹಲಿಯಲ್ಲಿಂದು ಕಾರ್ಯತಂತ್ರದ ಪ್ರಬಂಧವನ್ನು ಬಿಡುಗಡೆ ಮಾಡಿತು. ಭಾರತದ ದತ್ತಾಂಶ ಭದ್ರತಾ ಮಂಡಳಿಯ ಸಹಭಾಗಿತ್ವದಲ್ಲಿ ನೀತಿ ಫ್ರಾಂಟಿಯರ್ ತಂತ್ರಜ್ಞಾನ ಕೇಂದ್ರ, ದೇಶವನ್ನು ಫ್ರಾಂಟಿಯರ್ ತಂತ್ರಜ್ಞಾನ ರಾಷ್ಟ್ರವಾಗಿ ಪರಿವರ್ತಿಸುವ ಗುರಿಯೊಂದಿಗೆ ಈ ಪ್ರಬಂಧವನ್ನು ಬಿಡುಗಡೆ ಮಾಡಿದೆ ಎಂದು ನೀತಿ ಆಯೋಗದ ಸಿಇಒ ಬಿ.ವಿ.ಆರ್. ಸುಬ್ರಮಣ್ಯಂ ತಿಳಿಸಿದರು.

<><><><>

ಐಆರ್‌ಎಫ್‌ಸಿಗೆ ನವರತ್ನ ಸ್ಥಾನಮಾನ ನೀಡಿರುವುದು ಸಂಸ್ಥೆಯ ಆರ್ಥಿಕ ಶಕ್ತಿ ಮತ್ತು ರೈಲ್ವೆ ಮೂಲಸೌಕರ್ಯವನ್ನು ಬೆಂಬಲಿಸುವ ಬದ್ಧತೆಯ ಪ್ರತಿಬಿಂಬವಾಗಿದೆ ಎಂದು ಭಾರತೀಯ ರೈಲ್ವೆ ಹಣಕಾಸು ನಿಗಮ-ಐಆರ್‌ಎಫ್‌ಸಿಯ ಅಧ್ಯಕ್ಷ ಹಾಗೂ ವ್ಯವಸ್ಥಾಪಕ ನಿರ್ದೇಶಕ ಮನೋಜ್ ಕುಮಾರ್ ದುಬೆ ಹೇಳಿದ್ದಾರೆ. ನವದೆಹಲಿಯಲ್ಲಿಂದು ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ಅಮೃತ ಕಾಲದಲ್ಲಿ ಭಾರತ ೧೦ ಟ್ರಿಲಿಯನ್ ಡಾಲರ್ ಆರ್ಥಿಕತೆಯತ್ತ ಸಾಗುತ್ತಿದೆ. ಮೂಲಸೌಕರ್ಯ ಬೆಳವಣಿಗೆ ಮತ್ತು ಆಧುನೀಕರಣಕ್ಕಾಗಿ ಸಂಪನ್ಮೂಲಗಳನ್ನು ಸಜ್ಜುಗೊಳಿಸುವಲ್ಲಿ ಐಆರ್‌ಎಫ್‌ಸಿ ಪ್ರಮುಖ ಪಾತ್ರ ವಹಿಸುತ್ತದೆ. ಈ ಗೌರವ ನಿಗಮದ ಸಾಮರ್ಥ್ಯಗಳನ್ನು ವಿಸ್ತರಿಸಲು ಮತ್ತು ರಾಷ್ಟ್ರದ ಬೆಳವಣಿಗೆಗೆ ಹೆಚ್ಚಿನ ಕೊಡುಗೆ ನೀಡಲು ಪ್ರೇರೇಪಿಸಿದೆ ಎಂದರು.

<><><><>

ನವದೆಹಲಿಯ ರವೀಂದ್ರ ಭವನದಲ್ಲಿ ಇದೇ ೭ ರಿಂದ ೧೨ರವರೆಗೆ ಸಾಹಿತ್ಯ ಅಕಾಡೆಮಿಯು ಏಷ್ಯಾದ ಅತಿದೊಡ್ಡ ಸಾಹಿತ್ಯ ಉತ್ಸವವನ್ನು ಆಯೋಜಿಸಿದೆ. ಈ ಕುರಿತು ನವದೆಹಲಿಯಲ್ಲಿ ಸುದ್ದಿಗಾರರಿಗೆ ಮಾಹಿತಿ ನೀಡಿದ ಸಾಹಿತ್ಯ ಅಕಾಡೆಮಿ ಕಾರ್ಯದರ್ಶಿ ಡಾ. ಕೆ.ಶ್ರೀನಿವಾಸ್ ರಾವ್, ೬ ದಿನಗಳ ಈ ಉತ್ಸವವನ್ನು ಕೇಂದ್ರ ಸಂಸ್ಕೃತಿ ಸಚಿವ ಗಜೇಂದ್ರ ಸಿಂಗ್ ಶೇಖಾವತ್ ಉದ್ಘಾಟಿಸಲಿದ್ದಾರೆ. ೫೦ಕ್ಕೂ ಹೆಚ್ಚು ಭಾಷೆಗಳನ್ನು ಪ್ರತಿನಿಧಿಸುವ ದೇಶದ ವಿವಿಧ ಭಾಗಗಳಿಂದ ೭೦೦ಕ್ಕೂ ಹೆಚ್ಚು ಬರಹಗಾರರು ಉತ್ಸವದಲ್ಲಿ ಪಾಲ್ಗೊಳ್ಳಲಿದ್ದಾರೆ. ಈ ಕಾರ್ಯಕ್ರಮವು ಸುಮಾರು ೧೨೦ ಅಧಿವೇಶನಗಳನ್ನು ಒಳಗೊಂಡಿರುತ್ತದೆ ಎಂದು ತಿಳಿಸಿದರು.

<><><><>

ಪಾಕಿಸ್ತಾನದ ಲಾಹೋರ್‌ನಲ್ಲಿ ನಡೆಯುತ್ತಿರುವ ಐಸಿಸಿ ಚಾಂಪಿಯನ್ಸ್ ಕ್ರಿಕೆಟ್ ಟ್ರೋಫಿ ಕ್ರಿಕೆಟ್ ಪಂದ್ಯಾವಳಿಯ ೨ನೇ ಸೆಮಿಫೈನಲ್ಸ್ ಪಂದ್ಯದಲ್ಲಿಂದು ದಕ್ಷಿಣ ಆಫ್ರಿಕಾ ಮತ್ತು ನ್ಯೂಜಿಲೆಂಡ್ ಮುಖಾಮುಖಿಯಾಗಿವೆ. ಮೊದಲು ಬ್ಯಾಟಿಂಗ್ ಮಾಡಿದ ನ್ಯೂಜಿಲೆಂಡ್, ನಿಗದಿತ ೫೦ ಓವರ್‌ಗಳಲ್ಲಿ ೬ ವಿಕೆಟ್ ನಷ್ಟಕ್ಕೆ ೩೬೨ ರನ್ ಮಾಡಿದೆ. ಈ ಬೃಹತ್ ಗುರಿಯನ್ನು ಬೆನ್ನತ್ತಿರುವ ದಕ್ಷಿಣ ಆಫ್ರಿಕಾ ಇತ್ತೀಚಿನ ವರದಿಯಂತೆ ೧೨ ಓವರ್‌ಗಳಲ್ಲಿ ೧ ವಿಕೆಟ್ ನಷ್ಟಕ್ಕೆ ೭೨ ರನ್ ಮಾಡಿ ಆಡುತ್ತಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>